Akashvani : Bangalore
National Bulletin In Kannada
29.06.2024 : 19.35hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
29.06.2024 : 19.35hrs

**ಮುಖ್ಯಾಂಶಗಳು:**

1. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ನಾಳೆ ಮನ್ ಕಿ ಬಾತ್ ಕಾರ್ಯಕ್ರಮ
2. ಕರ್ನಾಟಕದ ವಿವಿಧ ರೈಲ್ವೆ ಯೋಜನೆಗಳ ತ್ವರಿತ ಜಾರಿ - ರೈಲ್ವೆ ಸಚಿವ ವಿ. ಸೋಮಣ್ಣ
3. ವಿಕೋಪ ನಿರ್ವಹಣೆಯಲ್ಲಿ ಭಾರತದಿಂದ ಅತ್ಯುತ್ತಮ ಅಭ್ಯಾಸ ಅಳವಡಿಕೆ - ಸಚಿವ ಅಮಿತ್ ಶಾ
4. ಮಹಿಳಾ ಟೆಸ್ಟ್ ಕ್ರಿಕೆಟ್; ದಕ್ಷಿಣ ಆಫ್ರಿಕಾ ವಿರುದ್ಧ ಭಾರತ ೬೦೩ ರನ್ ಮೊದಲ ಇನ್ನಿಂಗ್ಸ್ ಡಿಕ್ಲೇರ್
5. ಐಸಿಸಿ ಟಿ-೨೦ ಕ್ರಿಕೆಟ್; ವಿಶ್ವಕಪ್ ಕಿರೀಟಕ್ಕಾಗಿ ಭಾರತ - ದಕ್ಷಿಣ ಆಫ್ರಿಕಾ ಹಣಾಹಣಿ; ಬ್ಯಾಟಿಂಗ್ ಆಯ್ದುಕೊಂಡಿರುವ ಭಾರತ

*****

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ನಡೆಯುವ ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶದ ಜನರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೧೧ ನೇ ಸಂಚಿಕೆಯಾಗಿದೆ. ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ನಡೆಸಿಕೊಡುತ್ತಿರುವ ಮನ್ ಕಿ ಬಾತ್ ಕಾರ್ಯಕ್ರಮದ ಮೊದಲ ಸಂಚಿಕೆ ಇದಾಗಿದೆ. ಮನದ ಮಾತು ಕಾರ್ಯಕ್ರಮವನ್ನು ಆಕಾಶವಾಣಿ ಮತ್ತು ದೂರದರ್ಶನ, ಂಂ|ಖ ನ್ಯೂಸ್ ವೆಬ್‌ಸೈಟ್ ಮತ್ತು ನ್ಯೂಸ್‌ಆನ್‌ಏರ್ ಮೊಬೈಲ್ ಆಪ್‌ನ ಎಲ್ಲ ಜಾಲಗಳಲ್ಲಿ ಪ್ರಸಾರ ಮಾಡಲಾಗುತ್ತದೆ. ಇದು ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಒ ಮತ್ತು ಮಾಹಿತಿ ಮತ್ತು ಪ್ರಸಾರ

ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿ ನೇರ ಪ್ರಸಾರವಾಗಲಿದೆ. ಆಕಾಶವಾಣಿ ಹಿಂದಿ ಪ್ರಸಾರದ ನಂತರ ತಕ್ಷಣವೇ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಬಿತ್ತರ ಮಾಡಲಿದೆ.

*****

ಕರ್ನಾಟಕದ ವಿವಿಧ ರೈಲ್ವೆ ಯೋಜನೆಗಳ ಜಾರಿಯನ್ನು ತ್ವರಿತಗೊಳಿಸಲಾಗುವುದು ಎಂದು ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾನ್ಯ ಜನರಿಗೆ ಕೈಗೆಟಕುವಂತೆ ವಂದೇ ಭಾರತ್ ರೈಲುಗಳ ಟಿಕೆಟ್ ದರವನ್ನು ಪರಿಷ್ಕರಿಸುವ ನಿಟ್ಟಿನಲ್ಲಿ ಶೀಘ್ರ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಮುಂದಿನ ೨ ವರ್ಷಗಳಲ್ಲಿ ರೈಲ್ವೆಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ವಿಭಿನ್ನ ರೀತಿಯಲ್ಲಿ ಅಭಿವೃದ್ಧಿ ಕಾರ್ಯಗಳು ಜರುಗಲಿವೆ. ಜನಸಂದಣಿ ಇರುವ ಕಡೆಗಳಲ್ಲಿ ಎಲ್ಲೆಲ್ಲಿ ಸಾಧ್ಯವಿದೆಯೋ ಅಲ್ಲಲ್ಲಿ ರೈಲ್ವೆ ಅಂಡರ್‌ಪಾಸ್ ಮತ್ತು ರೈಲ್ವೆ ಓವರ್ ಬ್ರಿಡ್ಜ್ ನಿರ್ಮಾಣವನ್ನು ಸಮರೋಪಾದಿಯಲ್ಲಿ ಪೂರ್ಣಗೊಳಿಸಲಾಗುವುದು. ೨೮೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೧ ರೈಲ್ವೆ ಅಂಡರ್‌ಪಾಸ್ ಹಾಗೂ ೨೮೫ ಕೋಟಿ ರೂಪಾಯಿ ವೆಚ್ಚದಲ್ಲಿ ೧೧ ರೈಲ್ವೆ ಓವರ್ ಬಿಡ್ಜ್ ನಿರ್ಮಾಣವನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದರು. ಉಪನಗರ ರೈಲ್ವೆ ಯೋಜನೆಯನ್ನು ಶೀಘ್ರವಾಗಿ ಜಾರಿಗೆ ತರಲು ಅಗತ್ಯಕ್ರಮ ಕೈಗೊಳ್ಳಲಾಗುವುದು. ಹೆಜ್ಜಾಲ-ಚಾಮರಾಜನಗರ ನಡುವಿನ ೧೪೨ ಕಿಲೋಮೀಟರ್ ಹಳಿ ನಿರ್ಮಾಣಕ್ಕೆ ಶೀಘ್ರ ಸರ್ವೇ ನಡೆಸಿ, ಡಿಪಿಆರ್ ಸಿದ್ಧಪಡಿಸಲಾಗುವುದು. ಈ ಮಾರ್ಗಕ್ಕಾಗಿ ೬೨೭ ಎಕರೆಗಳ ಭೂಸ್ವಾಧೀನ ಅಗತ್ಯವಿದೆ. ಈ ಕುರಿತು ಮುಂದಿನ ೨೦ ದಿನಗಳಲ್ಲಿ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಸಚಿವ ಸೋಮಣ್ಣ ಮಾಹಿತಿ ನೀಡಿದರು. ತುಮಕೂರು-ಚಿತ್ರದುರ್ಗ-ದಾವಣಗೆರೆ ಹೊಸ ರೈಲ್ವೆ ಹಳಿ ನಿರ್ಮಾಣಕ್ಕಾಗಿ ೩೪೯ ಕೋಟಿ ರೂಪಾಯಿ ಅಗತ್ಯವಿದ್ದು, ೨೦೨೬ರ ವೇಳೆಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು. ಬೆಂಗಳೂರು ಮಹಾನಗರದಲ್ಲಿ ವರ್ತುಲ ರೈಲ್ವೆ ಮಾರ್ಗಕ್ಕಾಗಿ ಈಗಾಗಲೇ ನೀಲನಕ್ಷೆ ರೂಪಿಸಲಾಗಿದೆ. ೨೮೭ ಕಿಲೋಮೀಟರ್ ಉದ್ದದ ಈ ರೈಲ್ವೆ ಯೋಜನೆಯು ನಿಡುವಂದ-ವಡ್ಡರಹಳ್ಳಿ-ದೇವನಹಳ್ಳಿ-ಮಾಲೂರು-ಹೀಲಲಿಗೆ-ಹೆಜ್ಜಾಲ ಸೋಲೂರು-ನಿಡುವಂದ ನಿಲ್ದಾಣಗಳ ಮೂಲಕ ಬೆಂಗಳೂರು ನಗರದ ಪ್ರಮುಖ ರೈಲ್ವೆ ನಿಲ್ದಾಣಗಳಿಗೆ ಸಂಪರ್ಕ

ಕಲ್ಪಿಸುತ್ತದೆ. ಈ ಯೋಜನೆಗೆ ೨೩ ಸಾವಿರ ಕೋಟಿ ರೂಪಾಯಿ ವೆಚ್ಚವಾಗಲಿದ್ದು, ಡಿಪಿಆರ್ ಕಾರ್ಯ ಪ್ರಗತಿಯಲ್ಲಿದೆ. ಎಂದು ಸಚಿವ ಸೋಮಣ್ಣ ತಿಳಿಸಿದರು.

*****

ಪವಿತ್ರ ಅಮರನಾಥ ಗುಹಾ ದೇಗುಲಕ್ಕೆ ೫೨ ದಿನಗಳ ಸುದೀರ್ಘ ವಾರ್ಷಿಕ ಯಾತ್ರೆಯು ಇಂದು ಆರಂಭವಾಗಿದೆ. ಆಗಸ್ಟ್ ೧೯ರ ಶ್ರಾವಣ ಪೂರ್ಣಿಮೆಯಂದು ಯಾತ್ರೆ ಮುಕ್ತಾಯವಾಗಲಿದೆ. ಯಾತ್ರೆಯನ್ನು ಸುಗಮವಾಗಿ ನಡೆಸಲು ಜಮ್ಮು ಮತ್ತು ಕಾಶ್ಮೀರ ಆಡಳಿತವು ಬಿಗಿ ಭದ್ರತೆ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಮಾಡಿದೆ.

*****

ಗುರುತಿಸಲಾದ ಅಪರಾಧ ಪ್ರಕರಣಗಳ ಪತ್ತೆಗೆ ಸಂಬಂಧಿಸಿದಂತೆ ಪಾರಮ್ಯ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯ ಹಾಗೂ ಹರಿಯಾಣ ಸರ್ಕಾರ ಇಂದು ಒಪ್ಪಂದವೊಂದಕ್ಕೆ ಸಹಿ ಹಾಕಿವೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ವಸತಿ ಮತ್ತು ಇಂಧನ ಖಾತೆ ಸಚಿವ ಮನೋಹರ್ ಲಾಲ್, ಹರಿಯಾಣ ಮುಖ್ಯಮಂತ್ರಿ ನೈಬ್ ಸಿಂಗ್, ವಿಧಾನಸಭಾಧ್ಯಕ್ಷ ಗ್ಯಾನ್‌ಚಂದ್ ಗುಪ್ತ ಸಮ್ಮುಖದಲ್ಲಿ ಈ ತಿಳುವಳಿಕೆ ಪತ್ರಕ್ಕೆ ಸಹಿ ಹಾಕಲಾಗಿದೆ. ಹರಿಯಾಣದ ಪಂಚಕುಲದಲ್ಲಿ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ೫೦ ಎಕರೆ ಪ್ರದೇಶದಲ್ಲಿ ಈ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಈ ಕೇಂದ್ರವು ಹೊಸ ಅಪರಾಧ ಕಾಯ್ದೆಗಳನ್ನು ತಳಮಟ್ಟದಲ್ಲಿ ಜಾರಿಗೊಳಿಸುವಲ್ಲಿ ವೈಜ್ಞಾನಿಕ ನೆರವು ಒದಗಿಸಲಿದೆ ಎಂದರು.

*****

ದೇಶದ ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ಅವರ ಜೀವನ ಮತ್ತು ಪಯಣ ಕುರಿತಾದ ಮೂರು ಪುಸ್ತಕಗಳನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ಬಿಡುಗಡೆ ಮಾಡಲಿದ್ದಾರೆ. ವೆಂಕಯ್ಯನಾಯ್ಡು ಅವರ ೭೫ನೇ ಹುಟ್ಟುಹಬ್ಬದ ಮುನ್ನಾ ದಿನ ಹೈದರಾಬಾದಿನ ಗಚಿಬೌಲಿ ಅನ್ವಯ ಸಮಾವೇಶ ಕೇಂದ್ರದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಧಾನಮಂತ್ರಿ ಅವರು, ವಿಡಿಯೊ ಕಾನ್ಫರೆನ್ಸ್ ಮೂಲಕ ಪಾಲ್ಗೊಳ್ಳಲಿದ್ದಾರೆ.

*****

ಭಾರತ ವಿಕೋಪ ನಿರ್ವಹಣೆಯಲ್ಲಿ ಅತ್ಯುತ್ತಮ ಅಭ್ಯಾಸಗಳನ್ನು ಅಳವಡಿಸಿಕೊಂಡಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಅವರು ಪರ್ವತಾರೋಹಣ ವಿಜಯ್ ಧ್ವಜ ಸಮಾರಂಭದಲ್ಲಿ ಮಾತನಾಡಿ, ರಾಷ್ಟ್ರೀಯ ವಿಕೋಪ ಪ್ರತಿಕ್ರಿಯಾ ಪಡೆ - ಎನ್‌ಡಿಆರ್‌ಎಫ್, ಆಧುನೀಕರಿಸಲು ಸರ್ಕಾರ ಎಲ್ಲ ಕ್ರಮಗಳನ್ನು ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ ವಿಶ್ವದ ಯಾವುದೇ ಭಾಗದಲ್ಲಿ ವಿಕೋಪಗಳು ಉಂಟಾದರೂ ಜನರು ನೆರವಿಗಾಗಿ ಭಾರತದತ್ತ ನೋಡುತ್ತಾರೆ. ಎಂತಹ ಕಠಿಣ ಸಂದರ್ಭಗಳಲ್ಲಿಯೂ ಕೂಡ ಎನ್‌ಡಿಆರ್‌ಎಫ್ ಪಡೆ ಬೆಂಬಲಕ್ಕೆ ಇದ್ದರೆ, ಸಂಕಷ್ಟದಲ್ಲಿ ತೊಡಗಿರುವ ಜನರ ನೈತಿಕ ಮಟ್ಟ ಬಲಗೊಳ್ಳುತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಸಚಿವ ಅಮಿತ್ ಶಾ, ಎನ್‌ಡಿಆರ್‌ಎಫ್ ಜವಾನರಿಗೆ ಅಪಾಯ ಮತ್ತು ಕಠಿಣತೆ ನಿರ್ವಹಣೆ ಭತ್ಯೆಯನ್ನು ಪ್ರಕಟಿಸಿದರು. ಪರ್ವತಾರೋಹಣವನ್ನು ಯಶಸ್ವಿಯಾಗಿ ನಿರ್ವಹಿಸಿದ ಎನ್‌ಡಿಆರ್‌ಎಫ್ ತಂಡವನ್ನು ಅಭಿನಂದಿಸಿದ ಗೃಹ ಸಚಿವರು, ಇಂತಹ ಕಠಿಣ ಕಾರ್ಯಾಚರಣೆಗಳು ವೈಯಕ್ತಿಕ ಹಾಗೂ ಪಡೆಯ ದಕ್ಷತೆಯನ್ನು ಹೆಚ್ಚಿಸುತ್ತವೆ ಎಂದು ಹೇಳಿದರು. ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಕುಮಾರ್ ಭಲ್ಲಾ, ಎನ್‌ಡಿಆರ್‌ಎಫ್ ಮಹಾ ನಿರ್ದೇಶಕ ಪಿಯೂಶ್ ಆನಂದ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಎನ್‌ಡಿಆರ್‌ಎಫ್ ಜವಾನರು ಹಿಮಾಚಲಪ್ರದೇಶದ ೨೧ ಸಾವಿರದ ೬೨೫ ಅಡಿ ಎತ್ತರದ ಮಣಿರಂಗ್ ಶಿಖರವನ್ನು ಯಶಸ್ವಿಯಾಗಿ ಆರೋಹಣ ಮಾಡಿದ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

*****

ದೆಹಲಿಯಲ್ಲಿ ನಿರ್ಮಿಸಲಾಗುತ್ತಿರುವ ಯುಗ ಯಗೀನ್ ಭಾರತ ವಸ್ತು ಸಂಗ್ರಹಾಲಯ ದೇಶದ ವಾಸವಿಕ ಪಯಣವನ್ನು ಬಿಂಬಿಸುತ್ತದೆ ಎಂದು ಸಂಸ್ಕೃತಿ ಖಾತೆ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ಹೇಳಿದ್ದಾರೆ. ಈ ವಸ್ತುಸಂಗ್ರಹಾಲಯ ಕುರಿತಂತೆ ಏರ್ಪಡಿಸಲಾಗಿದ್ದ ಭಾರತ-ಫ್ರೆಂಚ್ ಸಹಯೋಗದ ಸಾಮರ್ಥ್ಯ ನಿರ್ಮಾಣ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ದೇಶದ ಭೂತ, ವರ್ತಮಾನ ಹಾಗೂ ಭವಿಷ್ಯಗಳನ್ನು ಪ್ರತಿಬಿಂಬಿಸುವ ಈ ಉದ್ದೇಶಿತ ವಸ್ತುಸಂಗ್ರಹಾಲಯ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕನಸಿನ ಯೋಜನೆಯಾಗಿದೆ. ಯೋಜನೆಯನ್ನು ಅರ್ಥಪೂರ್ಣವಾಗಿ

ಸಾಕಾರಗೊಳಿಸಲು ಎಲ್ಲ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಹೇಳಿದರು. ಸಂಸ್ಕೃತಿ ಖಾತೆ ಕಾರ್ಯದರ್ಶಿ ಮೋಹನ್ ಗೋವಿಂದ್ ಅವರು ಮಾತನಾಡಿ, ಉದ್ದೇಶಿತ ವಸ್ತುಸಂಗ್ರಹಾಲಯ ಭಾರತದ ಶ್ರೀಮಂತ ಕಲೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸಲಿದ್ದು, ಮುಂದಿನ ಜನಾಂಗಕ್ಕೆ ಸ್ಫೂರ್ತಿಯ ತಾಣವಾಗಲಿದೆ ಎಂದು ಹೇಳಿದರು.

*****

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ, ರದ್ದುಗೊಳಿಸಿದ್ದ ಹಾಗೂ ಮುಂದೂಡಲಾಗಿದ್ದ ವಿವಿಧ ಪರೀಕ್ಷೆಗಳಿಗಾಗಿ ಹೊಸ ದಿನಾಂಕಗಳನ್ನು ಘೋಷಿಸಿದೆ. ಯುಜಿಸಿ-ನೆಟ್ ಜೂನ್ ೨೦೨೪ ಪರೀಕ್ಷೆಯನ್ನು ಆಗಸ್ಟ್ ೨೧ರಿಂದ ಸೆಪ್ಟೆಂಬರ್ ೪ರ ನಡುವೆ ನಡೆಸಲಾಗುವುದು ಎಂದು ಎನ್‌ಟಿಎ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ. ಈ ತಿಂಗಳ ೧೮ರಂದು ನಡೆಸಲಾಗಿದ್ದ ಪರೀಕ್ಷೆಯಲ್ಲಿ ಸಮಗ್ರತೆಯಲ್ಲಿ ಹೊಂದಾಣಿಕೆ ಮಾಡಿಕೊಳ್ಳಲಾಗಿದೆ ಎನ್ನುವ ಮಾಹಿತಿ ಹಿನ್ನೆಲೆಯಲ್ಲಿ ಶಿಕ್ಷಣ ಸಚಿವಾಲಯ ಇದನ್ನು ರದ್ದುಪಡಿಸಿತ್ತು. ಯುಜಿಸಿ-ನೆಟ್, ಜೂನಿಯರ್ ರಿಸರ್ಚ್ ಫೆಲೋಶಿಪ್, ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮತ್ತು ಪಿಎಚ್‌ಡಿ ಕೋರ್ಸ್‌ಗಳಿಗೆ ಪ್ರವೇಶಕ್ಕಾಗಿ ಅರ್ಹತೆಯನ್ನು ನಿರ್ಧರಿಸುವ ಪರೀಕ್ಷೆಯಾಗಿದೆ. ಇದೇ ವೇಳೆ, ಜಂಟಿ ಸಿಎಸ್‌ಐಆರ್-ಯುಜಿಸಿ-ನೆಟ್ ಜೂನ್ ೨೦೨೪ ಪರೀಕ್ಷೆಯು ಜುಲೈ ೨೫ರಿಂದ ೨೭ರ ವರೆಗೆ ನಡೆಯಲಿದೆ ಎಂದು ಎನ್‌ಟಿಎ ತಿಳಿಸಿದೆ. ಕೌನ್ಸಿಲ್ ಫಾರ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್, ಸಿಎಸ್‌ಐಆರ್- ಯುಜಿಸಿ-ನೆಟ್ ಅನ್ನು ರಾಸಾಯನಿಕ ವಿಜ್ಞಾನಗಳು, ಭೂಮಿ, ವಾತಾವರಣ, ಸಾಗರ ಮತ್ತು ಗ್ರಹ ವಿಜ್ಞಾನಗಳು, ಜೀವ ವಿಜ್ಞಾನಗಳು, ಗಣಿತ ವಿಜ್ಞಾನಗಳು ಮತ್ತು ಭೌತಿಕ ವಿಜ್ಞಾನಗಳಲ್ಲಿ ಪಿಎಚ್‌ಡಿ ಪ್ರವೇಶಕ್ಕಾಗಿ ನಡೆಸಲಾಗುತ್ತದೆ. ಅಲ್ಲದೇ, ನಾಲ್ಕು ವರ್ಷಗಳ ಇಂಟಿಗ್ರೇಟೆಡ್ ಟೀಚರ್ ಎಜುಕೇಶನ್ ಪ್ರೋಗ್ರಾಂ-ಐಟಿಇಪಿ ಪ್ರವೇಶಕ್ಕಾಗಿ ರಾಷ್ಟ್ರೀಯ ಸಾಮಾನ್ಯ ಪ್ರವೇಶ ಪರೀಕ್ಷೆ-ಎನ್‌ಸಿಇಟಿ ಅನ್ನು ಜುಲೈ ೧೦ ರಂದು ನಡೆಸಲಾಗುವುದು. ಈ ಎರಡೂ ಪರೀಕ್ಷೆಗಳನ್ನು ಮುಂದೂಡಲಾಗಿತ್ತು. ಅಖಿಲ ಭಾರತ ಆಯುಷ್ ಸ್ನಾತಕೋತ್ತರ ಪ್ರವೇಶ ಪರೀಕ್ಷೆ-೨೦೨೪ ಹಿಂದಿನ ವೇಳಾಪಟ್ಟಿಯಂತೆ ಜುಲೈ ೬ ರಂದು ನಡೆಯಲಿದೆ ಎಂದು ಎನ್‌ಟಿಎ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಅಧಿಕೃತ ವೆಬ್‌ಸೈಟ್ www.nta.ac.in ಗೆ ಭೇಟಿ ನೀಡುವಂತೆ ಎನ್‌ಟಿಎ ಮಾಹಿತಿ ನೀಡಿದೆ.

*****

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಟೆಸ್ಟ್ ಕ್ರಿಕೆಟ್‌ನಲ್ಲಿ ಭಾರತ ೬೦೩ ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿದೆ. ನಿನ್ನೆಯ ನಾಲ್ಕು ವಿಕೆಟ್ ನಷ್ಟಕ್ಕೆ ೫೨೫ ರನ್‌ಗಳಿಂದ ಆಟ ಮುಂದುವರಿಸಿದ ಭಾರತದ ವನಿತೆಯರು, ೬ ವಿಕೆಟ್ ನಷ್ಟಕ್ಕೆ ೬೦೩ರನ್ ಗಳಿಸಿದ್ದಾಗ ಇನ್ನಿಂಗ್ಸ್ ಘೋಷಣೆ ಮಾಡಿಕೊಂಡರು. ಎರಡನೇ ದಿನದಾಟದ ಮುಕ್ತಾಯಕ್ಕೆ ದಕ್ಷಿಣ ಆಫ್ರಿಕಾ ೪ ವಿಕೆಟ್ ನಷ್ಟಕ್ಕೆ ೨೩೬ ರನ್ ಗಳಿಸಿದೆ. ನಡಿನೆ ಡಿಕ್ಲರ್ಕ್ ೨೭, ಮಾರಿಜನ್ನೆ ಕಾಪ್ ೬೯ ರನ್ ಗಳಿಸಿ ಆಟವಾಡುತ್ತಿದ್ದರು. ನಾಯಕಿ ಲಾರಾ ೨೦, ಸುನೆ ಲೂಸು ೬೫ ರನ್‌ಗಳಿಸಿದರೆ, ಡೆಲ್‌ಮಿ ಟಕರ್ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ಭಾರತದ ಸ್ನೇಹಾ ರಾಣಾ ೬೧ ರನ್ ನೀಡಿ, ೩ ವಿಕೆಟ್ ಪಡೆದಿದ್ದಾರೆ. ಭಾರತದ ಮೊದಲ ಇನ್ನಿಂಗ್ಸ್ ಸಮಗಟ್ಟಲು ದಕ್ಷಿಣ ಆಫ್ರಿಕಾ ಇನ್ನೂ ೩೬೭ ರನ್ ಗಳಿಸಬೇಕಿದೆ.

*****

ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯ ಇನ್ನು ಕೆಲವೇ ನಿಮಿಷಗಳಲ್ಲಿ ಆರಂಭವಾಗಲಿದೆ. ಭಾರತ ಹಾಗೂ ದಕ್ಷಿಣ ಆಫ್ರಿಕಾ ತಂಡಗಳು ಈ ಪ್ರತಿಷ್ಠಿತ ಟ್ರೋಫಿ ಕಿರೀಟಕ್ಕಾಗಿ ಸೆಣಸಲಿವೆ. ವೆಸ್ಟ್‌ಇಂಡೀಸ್‌ನ ಬಾರ್ಬಡೋಸ್‌ನ ಕೆನ್ನಿಂಗ್‌ಟನ್ ಓವಲ್ ಕ್ರಿಡಾಂಗಣದಲ್ಲಿ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾರತ, ಮೊದಲ ಬಾರಿಗೆ ಐಸಿಸಿ ವಿಶ್ವಕಪ್ ಫೈನಲ್ ಪ್ರವೇಶಿಸಿರುವ ದಕ್ಷಿಣ ಆಫ್ರಿಕಾ ತಂಡದ ವಿರುದ್ಧ ಸಂಘಟಿತ ಪ್ರದರ್ಶನ ನೀಡಲು ಸಕಲ ಸಿದ್ಧತೆ ಕೈಗೊಂಡಿದೆ.

**END***